# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1007

ಸದಸ್ಯರ ಹೆಸರು : ಶ್ರೀ. ಡಿ.ಎಸ್. ಅರುಣ್( ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 14.03.2025

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಕ್ಷೇತ್ರದ ಸುಸ್ಥಿರ ಹಾಗೂ ಲಾಭದಾಯಕಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರಗಳನ್ನು ಒದಗಿಸುವುದು) | ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳನ್ನು ಅನುಬಂಧ-1ರಲ್ಲಿ ಹಾಗೂ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಅಭಿವೃದ್ಧಿ ಯೋಜನೆಗಳು/ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ. |
| ಆ) | ಕಳೆದ ಎರಡು ವರ್ಷಗಳಿಂದ ಈ ನಿಟ್ಟಿನಲ್ಲಿ ಯಾವ ಹೊಸ ಯೋಜನೆಗಳನ್ನು ಜಾರಿಗೊಳಿಸಲಾಗಿದೆ.; | ಕಳೆದ ಎರಡು ವರ್ಷಗಳಿಂದ ಕೃಷಿ ಭಾಗ್ಯ, ಕೃಷಿ ನವೋದ್ಯಮ, ಹೈಟೆಕ್ ಹಾರ್ವೆಸ್ಟರ್ ಹಬ್, ಕರ್ನಾಟಕ ರೈತ ಸಮೃದ್ಧಿ, ಕೃಷಿ ಅಭಿವೃದ್ಧಿ ಪ್ರಾಧಿಕಾರ ರಚನೆ, ನಮ್ಮ ಮಿಲ್ಲೆಟ್, ಬೆಳೆ ಉತ್ಪಾದಕತೆಯನ್ನು ಮುನ್ಸೂಚಿಸಲು ದತ್ತಾಂಶ ಅಭಿವೃದ್ಧಿ ಪಡಿಸುವುದು, ಸಮುದಾಯ ಬೀಜ ಬ್ಯಾಂಕ್ ಕಾರ್ಯಕ್ರಮ, e-SAP ತಂತ್ರಾಂಶ, ರೈತ ಉತ್ಪಾದಕ ಸಂಸ್ಥೆಗಳಿಗೆ ಬೆಂಬಲ ನೀಡಲು Agri Accelerator Platform ಮೂಲಕ ಕೃಷಿ ವಲಯದ Start-up ಗಳ ಉತ್ತೇಜನ ಎಂಬ ಹೊಸ ಯೋಜನೆ/ಕಾರ್ಯಕ್ರಮಗಳನ್ನು ಕೃಷಿ ಇಲಾಖೆಯಿಂದ ಜಾರಿಗೊಳಿಸಲಾಗಿದೆ.<br><br>ಕಳೆದ ಎರಡು ವರ್ಷಗಳಿಂದ ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಜಾರಿಗೊಳಿಸಿರುವ ಹೊಸ ಯೋಜನೆಗಳ ವಿವರ ಕೆಳಕಂಡಂತಿದೆ;<br>• ಕೇಂದ್ರ ಪುರಸ್ಕೃತ "ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC-PMKSY 2.0)" ಯೋಜನೆಯು ಅನುಷ್ಠಾನದಲ್ಲಿರುತ್ತದೆ.<br>• ರೈತರು ಬೆಳೆದಂತಹ ಉತ್ಪನ್ನಗಳಿಗೆ ಏಕೀಕೃತ ಬ್ರ್ಯಾಡಿಂಗ್.<br>• ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲ್ಲೂಕುಗಳ 100 ರೈತ ಉತ್ಪಾದಕ ಸಂಸ್ಥೆಗಳಿಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳ ನೀಡುವ ತಲಾ 20 ಲಕ್ಷ ರೂ. ವರೆಗಿನ ಸಾಲಕ್ಕೆ ಶೇ. 4 ರ ಬಡ್ಡಿ ಸಹಾಯಧನ ಕಾರ್ಯಕ್ರಮ. |

| | | |
|---|---|---|
| ಇ) | ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಲವಾರು ಯೋಜನೆಗಳನ್ನು ಸಮನ್ವಯಗೊಳಿಸುವ ನಿಟ್ಟಿನಲ್ಲಿ ಯಾವ ಕ್ರಮಗಳನ್ನು ಕೈಗೊಂಡಿದೆ. | ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಯೋಜನೆಗಳನ್ನು ಸಮನ್ವಯಗೊಳಿಸುವ ನಿಟ್ಟಿನಲ್ಲಿ ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.<br>• ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳಡಿ ಕೇಂದ್ರದ ಪಾಲಿನ ಅನುದಾನ ಬಿಡುಗಡೆಗೆ ಅನುಗುಣವಾಗಿ ರಾಜ್ಯದ ಪಾಲಿನ ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಿ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.<br>• ಸೂಕ್ಷ್ಮ ನೀರಾವರಿ ಯೋಜನೆ, ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ ಮತ್ತು ಕೃಷಿ ಯಾಂತ್ರೀಕರಣ ಉಪ ಅಭಿಯಾನ ಯೋಜನೆಗಳಡಿ ರಾಜ್ಯ ಸರ್ಕಾರದಿಂದ ಹೆಚ್ಚುವರಿ ಅನುದಾನ ನೀಡಿ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.<br>• ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ನಿರ್ದೇಶನ/ಸುತ್ತೋಲೆ/ ಮಾರ್ಗಸೂಚಿಗಳನ್ವಯ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. |
| ಈ) | ಕಳೆದ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯ ಸರ್ಕಾರದ ರೈತರ ಸಮೃದ್ಧಿ ಯೋಜನೆ ಜಾರಿಗೊಂಡಿದೆಯೆ? | 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಕರ್ನಾಟಕ ರೈತ ಸಮೃದ್ಧಿ ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. |

**ಸಂಖ್ಯೆ:** AGRI/100/AML/2025

**(ಎನ್. ಚಲುವರಾಯಸ್ವಾಮಿ)**
**ಕೃಷಿ ಸಚಿವರು**

## LCQ-1007 (ಅನುಬಂಧ-1)
# ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ

1. **ಬೀಜಗಳ ಪೂರೈಕೆ:** ಕೃಷಿ ಇಲಾಖೆಯ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ (ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ) ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರವರೆಗೆ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರವರೆಗೆ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ.

2. **ಕೃಷಿ ಯಾಂತ್ರೀಕರಣ:** ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಈ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

3. **ಕೃಷಿ ಸಂಸ್ಕರಣೆ:** ಈ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಹಾಗೂ ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ. ಟಾರ್ಪಾಲಿನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

4. **ಹೈಟೆಕ್ ಹಾರ್ವೆಸ್ಟರ್ ಹಬ್**- ಬೆಳೆ ಕಟಾವು ಪ್ರಕ್ರಿಯೆಯನ್ನು ನಿಗದಿತ ಸಮಯದಲ್ಲಿ ಕೈಗೊಳ್ಳಲು ಹಾಗು ಕಟಾವು ಸಮಯದಲ್ಲಿ ಬೆಳೆ ನಷ್ಟವನ್ನು ತಡೆಗಟ್ಟಲು ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಹಂತ ಹಂತವಾಗಿ ಸ್ಥಾಪಿಸಲು ರಾಜ್ಯದಲ್ಲಿ ಪ್ರಚಲಿತವಿರುವ ಕೃಷಿ ಯಂತ್ರಧಾರೆ ಕೇಂದ್ರಗಳು / ರೈತ ಉತ್ಪಾದಕ ಸಂಸ್ಥೆಗಳು / ಸೇವಾದಾರ ಸಂಸ್ಥೆಗಳು/ವೈಯಕ್ತಿಕ ಫಲಾನುಭವಿಗಳನ್ನು ಒಳಗೊಂಡಂತೆ ಅರ್ಹತೆಯಿರುವ ಸಂಸ್ಥೆಗಳನ್ನು / ವೈಯಕ್ತಿಕ ಫಲಾನುಭವಿಗಳನ್ನು ಆಯ್ಕೆ ಮಾಡಿ ಅವಶ್ಯಕತೆಯಿರುವ ಪ್ರದೇಶಗಳಲ್ಲಿ Hi-Tech Harvester Hubs ಗಳನ್ನು ಸ್ಥಾಪಿಸಲಾಗುವುದು. ಸದರಿ ಕೇಂದ್ರಗಳಲ್ಲಿ ದಾಸ್ತಾನೀಕರಿಸುವ Hi-Tech ಕಟಾವು / ಒಕ್ಕಣೆ ಯಂತ್ರಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ರಂತೆ ಗರಿಷ್ಠ ರೂ.40.00 ಲಕ್ಷದವರೆಗೆ, ಪ.ಜ/ಪ.ಪಂ. ವರ್ಗದ ರೈತರಿಗೆ ಹಾಗೂ ಸಂಘ-ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ / FPO ಗಳನ್ನೊಳಗೊಂಡಂತೆ) ಶೇ.70 ರಂತೆ ಗರಿಷ್ಠ ರೂ.50.00 ಲಕ್ಷದವರೆಗೆ ಸಹಾಯಧನವನ್ನು ಒದಗಿಸಲಾಗುತ್ತಿದೆ. ಪ್ರತಿ ಒಂದು ಹೈಟೆಕ್ ಹಾರ್ವೆಸ್ಟರ್ ಹಬ್ ಘಟಕಕ್ಕೆ ಗರಿಷ್ಠ ಮೊತ್ತ ರೂ.100.00 ಲಕ್ಷಗಳು ಮೀರದಂತೆ (ರೂ.5.00 ಲಕ್ಷಗಳ ಆಡಳಿತಾತ್ಮಕ ವೆಚ್ಚ ಒಳಗೊಂಡಂತೆ) ಸಹಾಯಧನವನ್ನು ಒದಗಿಸಲಾಗುತ್ತಿದೆ. ಸದರಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತಿದೆ.

5. **ಸಸ್ಯ ಸಂರಕ್ಷಣೆ:** ರಾಜ್ಯದಲ್ಲಿ ಕೃಷಿ ಉತ್ತೇಜನಕ್ಕಾಗಿ ರೈತರುಗಳಿಗೆ ಅನುಕೂಲವಾಗುವಂತೆ ಎಲ್ಲಾ ವರ್ಗದ ರೈತರಿಗೆ ಶೇ.50ರ ಸಹಾಯಧನದಡಿ ಪ್ರತಿ ಹೆಕ್ಟೇರ್‌ಗೆ ರೂ.500/- ರಂತೆ ಗರಿಷ್ಠ 2 ಹೆ. ಗೆ ಸೀಮಿತಗೊಳಿಸಿ ಅನುದಾನದ ಲಭ್ಯತೆಗೆ ಅನುಗುಣವಾಗಿ ರೈತ ಸಂಪರ್ಕ ಕೇಂದ್ರಗಳ ಮೂಲಕ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ.

6. **ಇ-ಸ್ಯಾಪ್:** ಬೆಳೆಗಳಲ್ಲಿ ಕಂಡುಬರುವ ಕೀಟ/ ರೋಗ ಬಾಧೆ ಹಾಗೂ ಪೋಷಕಾಂಶಗಳ ಕೊರತೆಯನ್ನು ನಿಖರವಾಗಿ ಗುರುತಿಸಿ, ಪೀಡೆ ಬಾಧೆಯ ತೀವ್ರತೆಗನುಗುಣವಾಗಿ ನಿರ್ವಹಣಾ ಕ್ರಮಗಳನ್ನು ರೈತರಿಗೆ ತಲುಪಿಸಲು ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಿರುವ ವಿನೂತನ ತಂತ್ರಜ್ಞಾನವನ್ನು ರಾಜ್ಯಾದ್ಯಂತ ಇಲಾಖೆಯ ಮೂಲಕ ಅಳವಡಿಸಿಕೊಳ್ಳಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ ಸಾಮಾನ್ಯವಾಗಿ ಹೆಚ್ಚಿನ ಪ್ರದೇಶದಲ್ಲಿ ಬೆಳೆಯುತ್ತಿರುವ 51 ವಿವಿಧ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಕಂಡುಬರುವ 1000 ಕ್ಕೂ ಹೆಚ್ಚು ಕೀಟ/ ರೋಗ ಬಾಧೆ ಹಾಗೂ ಪೋಷಕಾಂಶಗಳ ಕೊರತೆಯ ಗುರುತಿಸುವಿಕೆ ಮತ್ತು ನಿರ್ವಹಣೆಗೆ ವಹಿಸಬೇಕಾದ ಕ್ರಮಗಳ ಮಾಹಿತಿಯನ್ನು ಇ-ಸ್ಯಾಪ್ ತಂತ್ರಾಂಶದಲ್ಲಿ ಅಳವಡಿಸಲಾಗಿರುತ್ತದೆ. ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಂತ್ರಿಕ ಸಿಬ್ಬಂದಿ, ಆತ್ಮ ಯೋಜನೆಯ ತಾಂತ್ರಿಕ ಸಿಬ್ಬಂದಿ ಹಾಗೂ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ತಾಂತ್ರಿಕ ಸಿಬ್ಬಂದಿಯ ಮೂಲಕ ರೈತರ ತಾಕುಗಳಿಗೆ ಬೇಟಿ ನೀಡಿ e-SAP ಮೂಲಕ ಕೀಟ/ರೋಗ ಬಾಧೆ ಹಾಗೂ ಪೋಷಕಾಂಶಗಳ ಕೊರತೆಗಳನ್ನು ನಿಖರವಾಗಿ ಗುರುತಿಸಿ ಕೈಗೊಳ್ಳಬೇಕಾದ ನಿರ್ವಹಣಾ ಕ್ರಮಗಳ ಮಾಹಿತಿಯನ್ನು ಒದಗಿಸಲಾಗುತ್ತಿದೆ.

7. **ರೈತ ಸಿರಿ & ಸಿರಿಧಾನ್ಯ ಉತ್ತೇಜನ:** ರೈತ ಸಿರಿ ಕಾರ್ಯಕ್ರಮದಡಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುತ್ತದೆ.

   ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ.10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ.

8. **ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮ:** ಕಣ್ಮರೆಯಾಗುತ್ತಿರುವ ಮತ್ತು ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳ ಬೀಜಗಳನ್ನು ಗುರುತಿಸುವುದು, ಸಂಗ್ರಹಿಸುವುದು, ಸಂರಕ್ಷಿಸುವುದು, ಅಭಿವೃದ್ಧಿಪಡಿಸುವ ಮುಖ್ಯ ಉದ್ದೇಶವನ್ನು ಹೊಂದಿರುತ್ತದೆ.

9. **ಸಾವಯವ ಇಂಗಾಲ ಅಭಿಯಾನ:** ರಾಜ್ಯದಲ್ಲಿ ಸಾವಯವ ಕೃಷಿ ಉತ್ತೇಜನಕ್ಕಾಗಿ ರೈತರುಗಳಿಗೆ ಅನುಕೂಲವಾಗುವಂತೆ ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉದ್ದೇಶದಿಂದ ಹಸಿರೆಲೆ ಗೊಬ್ಬರ ಬಳಕೆಯನ್ನು ಪ್ರೋತ್ಸಾಹಿಸಲು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಪ್ರಮುಖವಾಗಿ ಡಯಾಂಚಾ ಮತ್ತು ಸನ್ಹೆಂಪ್ ಹಸಿರೆಲೆ ಬೀಜಗಳನ್ನು ವಿತರಣೆ ಮಾಡಲಾಗುತ್ತಿದೆ.

10. **ಹೊಸ ಬೆಳೆ ವಿಮಾ ಯೋಜನೆ:** ಈ ಯೋಜನೆಯಡಿ ಪ್ರವಾಹ, ಅನಾವೃಷ್ಟಿ, ಅಕಾಲಿಕ ಮಳೆ ಮತ್ತು ಇತರೆ ನೈಸರ್ಗಿಕ ವಿಕೋಪಗಳಿಂದ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುತ್ತದೆ. ಸದರಿ ಯೋಜನೆಯಡಿ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ರೈತರು ಆಹಾರ ಮತ್ತು ಎಣ್ಣೆಕಾಳು ಬೆಳೆಗಳಿಗೆ ಮುಂಗಾರು ಹಂಗಾಮಿನಲ್ಲಿ ಶೇ.

2.00 ರಷ್ಟು, ಹಿಂಗಾರು/ಬೇಸಿಗೆ ಹಂಗಾಮಿನಲ್ಲಿ ಶೇ. 1.5 ರಷ್ಟು ಮತ್ತು ವಾರ್ಷಿಕ ವಾಣಿಜ್ಯ ಮತ್ತು ತೋಟಗಾರಿಕಾ ಬೆಳೆಗಳಿಗೆ ಶೇ. 5.00 ರಷ್ಟು ಪ್ರೀಮಿಯಂ ಮೊತ್ತವನ್ನು ಮಾತ್ರ ಪಾವತಿಸಬೇಕಾಗಿರುತ್ತದೆ ಹಾಗೂ ಎಲ್ಲಾ ವರ್ಗದ ರೈತರಿಗೆ ಪ್ರೀಮಿಯಂ ಮೊತ್ತವು ಸಮವಾಗಿರುತ್ತದೆ. ಒಟ್ಟು ವಾಣಿಜ್ಯ ವಿಮಾ ಕಂತಿನ ದರದಲ್ಲಿ ಎಲ್ಲಾ ವರ್ಗದ ರೈತರ ಪ್ರೀಮಿಯಂ ಮೊತ್ತವನ್ನು ಹೊರತುಪಡಿಸಿ ಉಳಿದ ಪ್ರೀಮಿಯಂ ಅನ್ನು ಪ್ರೀಮಿಯಂ ಸಬ್ಸಿಡಿಯಾಗಿ ರೈತರ ಪರವಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ವಿಮಾ ಸಂಸ್ಥೆಯವರಿಗೆ ನೀಡಲಾಗುತ್ತಿದೆ.

11. **ಬೆಳೆ ಸಮೀಕ್ಷೆ:** ಬೆಳೆ ಸಮೀಕ್ಷೆಯು ಫಲಾನುಭವಿ ಆಧಾರಿತ ಯೋಜನೆಯಾಗಿರುವುದಿಲ್ಲ. ರಾಜ್ಯದ ಎಲ್ಲಾ ರೈತರ ತಾಕುಗಳಲ್ಲಿ ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಬೆಳೆ ಸಮೀಕ್ಷೆ ದತ್ತಾಂಶವನ್ನು ಬೆಳೆ ವಿಮೆ, ಬೆಂಬಲ ಬೆಲೆ ಯೋಜನೆ, ಪರಿಹಾರ, ಪಹಣಿಯಲ್ಲಿ ಬೆಳೆ ನಮೂದು, ಬೆಳೆ ಸಾಲ ವಿತರಣೆಗಾಗಿ ಬ್ಯಾಂಕ್ ಗಳಲ್ಲಿ ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಯೋಜನೆಗಳಲ್ಲಿ ಬಳಸಬಹುದಾಗಿದೆ.

12. **ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ:** ಎಸ್.ಎಸ್.ಎಲ್.ಸಿ/ 10ನೇ ತರಗತಿಯನ್ನು ಪೂರೈಸಿರುವ ಹಾಗೂ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಮಕ್ಕಳಿಗೆ ಹಾಗೂ ಪ್ರೌಢಶಾಲಾ ಶಿಕ್ಷಣ ಪಡೆಯುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ ಮತ್ತು ಭೂರಹಿತ ಕೃಷಿ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಇತರೆ ಯಾವುದೇ ಇಲಾಖೆಯು ನೀಡುವ ವಿದ್ಯಾರ್ಥಿ ವೇತನ ಪಡೆಯುತ್ತಿರುವ ವಿದ್ಯಾರ್ಥಿಗಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ.

13. **ಕೃಷಿ ಭಾಗ್ಯ:** ಕೃಷಿ ಭಾಗ್ಯ ಯೋಜನೆಯನ್ನು ರಾಜ್ಯಾದ್ಯಂತ (ಎಲ್ಲ ಜಿಲ್ಲೆ/ತಾಲ್ಲೂಕುಗಳು) ವಿಸ್ತರಿಸಲಾಗಿದ್ದು, ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ರಾಜ್ಯದ ಮಳೆಯಾಶ್ರಿತ ಪ್ರದೇಶಗಳಲ್ಲಿ ಹಾಗೂ ಗಣಿಗಾರಿಕೆಯಿಂದ ಭಾದಿತ ಪ್ರದೇಶಗಳಲ್ಲಿ ಸುಸ್ಥಿರ ಕೃಷಿಯನ್ನು ಉತ್ತೇಜಿಸಿ ಬೆಳೆ ಉತ್ಪಾದಕತೆ ಮತ್ತು ರೈತರ ಜೀವನ ಮಟ್ಟವನ್ನು ಸುಧಾರಿಸುವ ಮೂಲಕ ಬರ ಉಪಶಮನದ ಗುರಿ ಹೊಂದಿರುತ್ತದೆ. ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಸುಸ್ಥಿರ ಕೃಷಿಯನ್ನಾಗಿ ರೂಪಾಂತರ ಗೊಳಿಸುವುದು, ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವುದು ಮತ್ತು ಆದಾಯವನ್ನು ಹೆಚ್ಚಿಸುವುದು. ಮಳೆ ನೀರನ್ನು ವ್ಯರ್ಥ ಮಾಡದೆ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ (GI Wire Fencing), ಹೊಂಡದಿಂದ ನೀರು ಎತ್ತಲು ಡೀಸೆಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್, ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ(ತುಂತುರು/ಹನಿ) ನೀರಾವರಿ ಘಟಕಗಳನ್ನು ಒದಗಿಸಲಾಗುತ್ತಿದೆ. ಈ ಯೋಜನೆಯಡಿ ಎಲ್ಲಾ ಘಟಕಗಳಿಗೆ (ತಂತಿ ಬೇಲಿ ಹೊರತುಪಡಿಸಿ) ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಸಹಾಯಧನವನ್ನು ಒದಗಿಸಲಾಗುತ್ತದೆ (ಷರಾ: ತಂತಿ ಬೇಲಿ ಘಟಕಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.50 ರಂತೆ ಸಹಾಯಧನ).

14. **ಕೃಷಿ ಭಾಗ್ಯ (SDMF):** ರಾಜ್ಯದಲ್ಲಿ ಬರ ಘೋಷಣೆಯಾದ ಪ್ರದೇಶಗಳಲ್ಲಿ ಕಂದಾಯ ಇಲಾಖೆಯ ರಾಜ್ಯ ವಿಪತ್ತು ಉಪಶಮನ ನಿಧಿ (SDMF) ಅಡಿ ಕೃಷಿ ಭಾಗ್ಯ ಯೋಜನೆಯನ್ನು ರಾಜ್ಯದ 223 ಬರಪೀಡಿತ ತಾಲ್ಲೂಕುಗಳಲ್ಲಿ ಕೃಷಿ ಭಾಗ್ಯ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.

15.**ಸೂಕ್ಷ್ಮ ನೀರಾವರಿ ಯೋಜನೆ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅನುಷ್ಠಾನಕ್ಕೆ ತೋಟಗಾರಿಕೆ ಇಲಾಖೆಯು ನೋಡಲ್ ಇಲಾಖೆಯಾಗಿರುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ರಾಜ್ಯದಲ್ಲಿ, ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಪೂರಕ ಸಹಾಯಧನವನ್ನು ಸೇರಿಸಿ ತುಂತುರು ನೀರಾವರಿ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ 2 ಹೆ ವರೆಗೆ ಶೇ.90 ರಷ್ಟು ಹಾಗೂ ಹನಿ ನೀರಾವರಿ ಘಟಕಗಳಿಗೆ ಸಣ್ಣ /ಅತೀ ಸಣ್ಣ/ಪ.ಜಾತಿ/ಪ.ಪಂಗಡದ ರೈತರಿಗೆ 2 ಹೆ ವರೆಗೆ ಶೇ.90 ರಷ್ಟು ಮತ್ತು ಇನ್ನುಳಿದಂತೆ 5 ಹೆ ಪ್ರದೇಶದವರೆಗೆ ಶೇ.45 ರಷ್ಟು ಸಹಾಯಧನ ಒದಗಿಸಿ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ.

16.**ಆಹಾರ ಮತ್ತು ಪೌಷ್ಠಿಕ ಭದ್ರತೆ (Food and Nutrition Security-FNS)**: ಈ ಯೋಜನೆಯಡಿ ಭತ್ತ, ದ್ವಿದಳಧಾನ್ಯ, TRFA-ದ್ವಿದಳಧಾನ್ಯ, ಒರಟುಧಾನ್ಯ, ನ್ಯೂಟ್ರಿಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ನ್ಯೂಟ್ರಿಸಿರಿಧಾನ್ಯ ಮತ್ತು ಒರಟುಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ನೀರು ಒದಗಿಸುವ ಪೈಪುಗಳು ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಿಗೆ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ನ್ಯೂಟ್ರಿಸಿರಿಧಾನ್ಯಗಳಿಗೆ ರೂ.3000/-ಪ್ರೋತ್ಸಾಹ ಧನ ನೀಡಲಾಗುತ್ತಿದೆ.

17.**ಕೃಷಿ ಯಾಂತ್ರೀಕರಣ ಉಪ ಅಭಿಯಾನ (Sub Mission on Agriculture Mechanisation-SMAM):** ರಾಜ್ಯದಲ್ಲಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು, ಕೃಷಿ ಕಾರ್ಮಿಕರ ಸಮಸ್ಯೆಯನ್ನು ನೀಗಿಸಲು, ಹೆಚ್ಚಿನ ಇಳುವರಿ ಪಡೆಯಲು ನೆರವಾಗುವಂತೆ ಸಹಕಾರಿಯಾಗಲು ಹಾಗೂ ಕ್ಷೇತ್ರ ಶಕ್ತಿಯನ್ನು (ಪ್ರಸ್ತುತವಿರುವ 2.115 KW/ Ha to 2.5kW/Ha by 2023 and 4.00kW/ha by 2030) ಹೆಚ್ಚಿಸಲು ಕೃಷಿ ಯಾಂತ್ರೀಕರಣ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಟ್ರ್ಯಾಕ್ಟರ್(45HP ವರೆಗೆ), ಪವರ್ ಟಿಲ್ಲರ್ ಗಳ ಜೊತೆಗೆ ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಶಕ್ತಿ ಚಾಲಿತ ಅಂತರ ಬೇಸಾಯ ಉಪಕರಣಗಳು, ಕೊಯ್ಲು ಮತ್ತು ಸಂಸ್ಕರಣಾ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ಡೀಸೆಲ್ ಪಂಪ್‌ಸೆಟ್ ಗಳು ಇತ್ಯಾದಿ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ಹೀಗೆ ಉಳುಮೆಯಿಂದ ಕೊಯ್ಲಿನವರೆಗೆ ಹಾಗು ಕೊಯ್ಲು ನಂತರ ಉಪಯುಕ್ತವಾಗುವ ವಿವಿಧ ನಮೂನೆಯ ಕೃಷಿ ಉಪಕರಣಗಳನ್ನು ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತಿದೆ.

18.**ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ (RKVY-IFS):** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ

ಒಟ್ಟಾರೆಯಾಗಿ 2400 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಿದ್ದು ಅದರಂತೆ ಅನುಷ್ಠಾನ ಮಾಡಲಾಗುತ್ತಿದೆ.

19. **ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds):** ಈ ಯೋಜನೆಯಡಿ ಎಣ್ಣೆಕಾಳುಗಳ ಉತ್ಪಾದನೆಯನ್ನು ಹೆಚ್ಚಿಸಲು ನೂತನ/ಸುಧಾರಿತ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಪೀಡೆನಾಶಕಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ, ಕೃಷಿ ಉಪಕರಣಗಳು ಹಾಗೂ ನೀರು ಒದಗಿಸುವ ಪೈಪುಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೇ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ವಿಂಟಾಲ್ ಬಿತ್ತನೆ ಬೀಜೋತ್ಪಾದನೆಗೆ ರೂ.2500/-ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

20. **ಬೆಳೆ ವೈವಿಧ್ಯತೆ ಕಾರ್ಯಕ್ರಮ (Crop Diversification Programme-CDP):** ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಬೆಳೆ ವೈವಿಧ್ಯತೆ ಕಾರ್ಯಕ್ರಮದಡಿ (Crop Diversification Programme) ತಂಬಾಕು ಬೆಳೆಗೆ ಪರ್ಯಾಯ ಬೆಳೆ ಕಾರ್ಯಕ್ರಮವನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ಸಹಯೋಗದೊಂದಿಗೆ ಅನುಮೋದಿತ ಕ್ರಿಯಾ ಯೋಜನೆಯನ್ವಯ ಪ್ರಾತ್ಯಕ್ಷಿತೆಗಳು, ಸಮಗ್ರ ಕೃಷಿ ಪದ್ಧತಿಗಳು, ಕೃಷಿ ಹೊಂಡ ನಿರ್ಮಾಣ, ಹಸಿರೆಲೆ ಗೊಬ್ಬರ ಬೀಜ ವಿತರಣೆಗೆ ಶೇಕಡ 50ರ ರಿಯಾಯಿತಿಯಲ್ಲಿ ಸಹಾಯಧನ ನೀಡುವುದರ ಜೊತೆಗೆ ರೈತರಿಗೆ ತರಬೇತಿ ಕಾರ್ಯಕ್ರಮಗಳ ಆಯೋಜನೆ ಹಾಗೂ ತೋಟಗಾರಿಕೆ ಇಲಾಖೆಯಡಿ ಯಂತ್ರೋಪಕರಣಗಳ ಬಳಕೆ ಹಾಗೂ ಮೌಲ್ಯವರ್ಧನೆ ಕಾರ್ಯಕ್ರಮಗಳನ್ನು ಬೆಳಗಾವಿ, ಹಾಸನ ಮತ್ತು ಮೈಸೂರು ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ರೈತರನ್ನು ತಂಬಾಕು ಬೆಳೆಯ ಬದಲು ಪರ್ಯಾಯ ಬೆಳೆ ಬೆಳೆಸಲು ಪ್ರೋತ್ಸಾಹಿಸುವುದು ಹಾಗೂ ರೈತರ ಆದಾಯ ಹೆಚ್ಚಿಸಲು ಕೃಷಿ ಜೊತೆಗೆ ಇತರೆ ಆದಾಯ ನೀಡುವ ಚಟುವಟಿಕೆಗಳನ್ನು ಅಳವಡಿಸಲು ಪ್ರೇರೇಪಿಸುವ ಉದ್ದೇಶದೊಂದಿಗೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ.

21. **ಕೃಷಿ ವಿಸ್ತರಣೆ ಉಪ ಅಭಿಯಾನ (Sub Mission on Agriculture Extension-SMAE):** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರಿ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ. ಯೋಜನೆಯಡಿ ಆಯೋಜಿಸುವ ವಿಸ್ತರಣಾ ಕಾರ್ಯಕ್ರಮಗಳಲ್ಲಿ ಎಲ್ಲಾ ವರ್ಗದ ರೈತರು / ರೈತ ಮಹಿಳೆಯರ ಪಾಲ್ಗೊಳ್ಳುವಿಕೆ ಅವಕಾಶವಿರುತ್ತದೆ.

22. **ಮಣ್ಣು ಆರೋಗ್ಯ ಮತ್ತು ಫಲವತ್ತತೆ ಯೋಜನೆ (Soil Health & Fertility-SHF):** ಮಣ್ಣು ಮಾದರಿಗಳನ್ನು ಸಂಗ್ರಹಣೆ, ವಿಶ್ಲೇಷಣೆ ಮತ್ತು ಮಣ್ಣು ಆರೋಗ್ಯ ಚೀಟಿಗಳ ವಿತರಣೆ. ಇಲಾಖೆಯ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ ಮತ್ತು NABL recognition ಕೈಗೊಳ್ಳಲಾಗುವುದು. ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ NABL ಅಕ್ರಿಡಿಟೇಷನ್ ಕೈಗೊಳ್ಳಲಾಗುವುದು. ಜಲಾನಯನ ಅಭಿವೃದ್ಧಿ ಇಲಾಖೆವತಿಯಿಂದ ಅಂತರ್ ಬಸಿಗಾಲುವೆ ಕಾಲುವೆಗಳ ಮೂಲಕ ಸಮಸ್ಯಾತ್ಮಕ ಮಣ್ಣುಗಳ ಉಪಚಾರ ಮಾಡಲಾಗುವುದು.

**23.ರೈತ ಕರೆ ಕೇಂದ್ರ:** ಕೃಷಿ ಇಲಾಖೆಯ 'ರೈತ ಕರೆ ಕೇಂದ್ರ'ವನ್ನು ಆಗಸ್ಟ್ 2023 ರಲ್ಲಿ ಮಾನ್ಯ ಕೃಷಿ ಸಚಿವರು ಉದ್ಘಾಟಿಸಿದ್ದು,ಈ ಕೇಂದ್ರವು ಪ್ರಸ್ತುತ ಬೆಂಗಳೂರಿನ ಕೃಷಿ ಆಯುಕ್ತಾಲಯದಲ್ಲಿ ಕಾರ್ಯನಿರ್ವಹಿಸುತ್ತಿದೆ. ಲ್ಯಾಂಡ್‌ಲೈನ್ ಮತ್ತು ಎಲ್ಲಾ ಟೆಲಿಕಾಂ ನೆಟ್‌ವರ್ಕ್‌ಗಳ ಮೊಬೈಲ್ ಸಂಖ್ಯೆಗಳ ಮೂಲಕ 09.00 A.M ನಿಂದ 07.00 P.M. ವರೆಗೆ ಒಂದೇ ರಾಜ್ಯ-ವ್ಯಾಪಿ ಟೋಲ್-ಫ್ರೀ ಸಂಖ್ಯೆ 1800-425-3553 ಅನ್ನು ಡಯಲ್ ಮಾಡುವ ಮೂಲಕ ಕರೆ ಕೇಂದ್ರಕ್ಕೆ ಕರೆ ಮಾಡಬಹುದು. ಪ್ರಸ್ತುತ PM-KISAN, ಬೆಳೆ ವಿಮೆ ಮತ್ತು ಬೆಳೆ ಸಮೀಕ್ಷೆ ಕುರಿತಾಗಿನ ಕರೆಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ವೀಕೃತವಾಗುತ್ತಿವೆ. ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿನ ತಂತ್ರಜ್ಞಾನಗಳು ಮತ್ತು ಸೇವೆಗಳಿಗೆ ಸಂಬಂಧಿಸಿದ ರೈತರ ಪ್ರಶ್ನೆಗಳಿಗೆ ಒಂದೇ ಸಹಾಯವಾಣಿಯನ್ನು ಒದಗಿಸುವುದು. ಭಾರತ ಸರ್ಕಾರ ಮತ್ತು ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಗಳ ವಿವಿಧ ಚಾಲ್ತಿಯಲ್ಲಿರುವ ಯೋಜನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಒದಗಿಸುವುದು. ಈ ಕೇಂದ್ರಗಳ ಮೂಲಕ ಸುಧಾರಿತ ಕಾಲ್‌ಸೆಂಟರ್ ತಂತ್ರಜ್ಞಾನಗಳನ್ನು ಬಳಸಿಕೊಂಡು ಸುಧಾರಿತ ಬೇಸಾಯ ಕ್ರಮಗಳು ಸೇರಿದಂತೆ ನಿಯತಕಾಲಿಕ ಮತ್ತು ನಿಯತಕಾಲಿಕವಲ್ಲದ ಕೃಷಿ ಮಾಹಿತಿ/ ಸಲಹೆಗಳನ್ನುಒದಗಿಸುವುದು ಕರೆ ಕೇಂದ್ರದ ಮುಖ್ಯ ಉದ್ದೇಶವಾಗಿರುತ್ತದೆ. ಕರೆ ಕೇಂದ್ರ ಪ್ರಾರಂಭದಿಂದ ಒಟ್ಟು 165725 ಕರೆಗಳು ಸ್ವಿಕೃತವಾಗಿದ್ದು ಸದರಿ ಕರೆಗಳನ್ನು ವಿಲೆಗೊಳಿಸಿದೆ.

**24.ಕರ್ನಾಟಕ ರೈತ ಸಮೃದ್ಧಿ ಯೋಜನೆ:** ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸಲು ರಾಜ್ಯದಲ್ಲಿ ಪ್ರಸ್ತುತ ಕೃಷಿ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳನ್ನು ಕೇಂದ್ರ ಬಿಂದುವಾಗಿರಿಸಿಕೊಂಡು ವಿವಿಧ ರೈತಪರ ಯೋಜನೆಗಳನ್ನು ಸಂಯೋಜಿಸುವ ಮೂಲಕ, ರೈತ ಮತ್ತು ರೈತ ಗುಂಪುಗಳಿಗೆ ಗುಣಮಟ್ಟದ ಉತ್ಪಾದನೆ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ರಫ್ತು ಮಾಡುವುದರ ಬಗ್ಗೆ ಸಾಮರ್ಥ್ಯ ಅಭಿವೃದ್ಧಿ ಹಾಗೂ ಅರಿವು ಮೂಡಿಸುವುದು. ರೈತರಿಗೆ ಮಣ್ಣು ಪರೀಕ್ಷೆಯ ಆಧಾರದ ಮೇಲೆ ಯಾವ ಬೆಳೆ ಬೆಳೆಯಬೇಕೆಂಬ ಕುರಿತು ಹಾಗೂ ಮಾರುಕಟ್ಟೆ ಬೇಡಿಕೆಯನ್ನು ಆಧರಿಸಿ ಮಾರ್ಗದರ್ಶನ ನೀಡುವುದು ಇತ್ಯಾದಿಗಳ ಮೂಲಕ ಆಹಾರ ಉತ್ಪಾದನೆ ಹಾಗೂ ರೈತರ ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿ ಘಟಕದಡಿ ಸಾಮಾನ್ಯ ವರ್ಗದ ರೈತರಿಗೆ ಶೇ.50ರ ಸಹಾಯಧನ ಹಾಗೂ ಪ.ಜಾ/ಪ.ಪಂ ವರ್ಗದ ರೈತರಿಗೆ ಶೇ.90ರ ಸಹಾಯಧನ ನೀಡಲಾಗುತ್ತದೆ.

**25.ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (PMFME):** ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುವುದು. KAPPEC ಸಂಸ್ಥೆಯು ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯಾಗಿರುತ್ತದೆ.

ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲಾಗುತ್ತಿದೆ.

ಯೋಜನೆಯ ಅನುಷ್ಠಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40ರ ಅನುಪಾತದಲ್ಲಿ ಇದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರವು ಶೇ.35ರಷ್ಟು ಹಾಗೂ ರಾಜ್ಯ ಸರ್ಕಾರವು PMFME ಯೋಜನೆಯಡಿಯಲ್ಲಿ ಶೇ.15 ರಷ್ಟು ಹೆಚ್ಚುವರಿ ಸಹಾಯಧನವನ್ನು ನೀಡಲಾಗುತ್ತಿದೆ.

ಅನುಬಂಧ - 2

(LCQ 1007)

## ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಅಭಿವೃದ್ಧಿ ಯೋಜನೆಗಳು / ಕಾರ್ಯಕ್ರಮಗಳ ವಿವರ

1. **ಜಲಾನಯನ ಅಭಿವೃದ್ಧಿ ಇಲಾಖೆ ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC-PMKSY 2.0) :**

ಈ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಯೋಜನೆಯಡಿ ಸಮರ್ಥ ನೀರು ಕೊಯ್ಲು, ಮಣ್ಣಿನ ತೇವಾಂಶ ಸಂರಕ್ಷಣೆ, ಪರ್ಯಾಯ ಬೆಳೆ ವ್ಯವಸ್ಥೆಗಳು, ಕೃಷಿ ಅರಣ್ಯ, ಖುಷ್ಕಿ ತೋಟಗಾರಿಕೆ, ಪಶುಸಂಗೋಪನೆಯ ಮೂಲಕ ಹವಾಮಾನ/ವೈಪರೀತ್ಯ ಮತ್ತು ಬರಗಾಲದ ಅಪಾಯಗಳನ್ನು ಎದುರಿಸುವುದು ಮತ್ತು ರೈತರ ಆದಾಯವನ್ನು ಭದ್ರಪಡಿಸುವುದು; ಯೋಜನಾ ಪ್ರದೇಶಗಳಲ್ಲಿ ನೈಸರ್ಗಿಕ ಸಂಪನ್ಮೂಲಗಳ ಸಮರ್ಥನೀಯ ಬಳಕೆಯ ಮೂಲಕ ಬೆಳೆಗಳು, ಜಾನುವಾರು, ಮೀನುಗಾರಿಕೆ, ಹಾಗೂ ಉತ್ಪಾದನಾ ವ್ಯವಸ್ಥೆಗಳ ಮೂಲಕ ಉತ್ಪಾದಕತೆಯನ್ನು ಸುಧಾರಿಸುವುದು; ಆಸ್ತಿ ರಹಿತ ರೈತರನ್ನು ಗುರುತಿಸುವುದು ಮತ್ತು ಪರ್ಯಾಯ ಜೀವನೋಪಾಯದ ಅವಕಾಶಗಳನ್ನು ಉತ್ತೇಜಿಸುವುದು; ಸುಲಭವಾದ ಕೈಗೆಟುಕುವ ತಂತ್ರಜ್ಞಾನಗಳ ಉತ್ತೇಜನ ಮಾಡುವುದು; ಆದಾಯವನ್ನು ಉತ್ಪಾದಿಸುವ ಅವಕಾಶಗಳಿಗೆ ಹೆಚ್ಚಿನ ಉತ್ತೇಜನ ನೀಡುವುದು ಹಾಗೂ ರೈತ ಉತ್ಪಾದಕರ ಸಂಸ್ಥೆಗಳನ್ನು ರಚಿಸುವುದು/ಬಲವರ್ಧಿಸಲು ಕಾರ್ಯಕ್ರಮವನ್ನು ರೂಪಿಸಲಾಗಿದೆ.

ಈ ಯೋಜನೆಯಡಿ ಸಮತಟ್ಟಾದ ಪ್ರದೇಶದ ಜಲಾನಯನ ಚಟುವಟಿಕೆಗಳ ಅನುಷ್ಠಾನಕ್ಕೆ ರೂ. 22,000 ಪ್ರತಿ ಹೆಕ್ಟೇರ್ ಗೆ, ಮರುಭೂಮಿ ಮತ್ತು ಗುಡ್ಡ ಗಾಡು ಪ್ರದೇಶದಲ್ಲಿ ಜಲಾನಯನ ಚಟುವಟಿಕೆಗಳ ಅನುಷ್ಠಾನಕ್ಕೆ ರೂ. 28,000 ಪ್ರತಿ ಹೆಕ್ಟೇರ್ ಗೆ ಅನುದಾನವನ್ನು ಒದಗಿಸಲಾಗುತ್ತದೆ.

2. **ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD) RKVY-RAFTAAR:**

ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ವಿಶೇಷವಾಗಿ ರಾಜ್ಯದ ಎಲ್ಲಾ ಮಳೆಯಾಶ್ರಿತ ಪ್ರದೇಶದಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ಈ ಯೋಜನೆಯ ಮುಖ್ಯ ಉದ್ದೇಶವು ರೈತರ ಜಮೀನಿನಲ್ಲಿ ವಿವಿಧ ಮಾದರಿಯ ಸಮಗ್ರ ಕೃಷಿ ಪದ್ಧತಿಗಳನ್ನು ಹಾಗೂ ಮೌಲ್ಯವರ್ಧಿತ ಚಟುವಟಿಕೆಗಳನ್ನು ಅಳವಡಿಸಿಕೊಳ್ಳುವಂತೆ ಉತ್ತೇಜಿಸುವುದು; ರೈತರಿಗೆ ಸಮಗ್ರ ಕೃಷಿ ಪದ್ಧತಿಗಳಾದ ಸಮಗ್ರ ಕೃಷಿ ಪದ್ಧತಿಯಡಿ ಬೆಳೆಗಳು (ರಾಗಿ ಬೆಳೆಗಳು / ಎಣ್ಣೆಬೀಜಗಳು/ ದ್ವಿದಳ ಧಾನ್ಯಗಳು/ತರಕಾರಿಗಳು/ಮೇವು) + ಮರಗಳು (ತೋಟಗಾರಿಕೆ/ ಕೃಷಿ ಅರಣ್ಯ)+ ಜಾನುವಾರುಗಳು ಹಾಲು ಹಸುಗಳು / ಎಮ್ಮೆಗಳು / ಸಣ್ಣ ಮೆಲುಕು ಹಾಕುವ ಪ್ರಾಣಿಗಳು (10 ಪ್ರಾಣಿಗಳು (ಕುರಿ ಅಥವಾ ಮೇಕೆ ಅಥವಾ ಹಂದಿಗಳು) / 50 ಪಕ್ಷಿಗಳು (ಬಾತುಕೋಳಿ) ಅಳವಡಿಸಲು ಉತ್ತೇಜಿಸುವುದು. ಮೌಲ್ಯವರ್ಧನೆ ಚಟುವಟಿಕೆಗಳಾದ ಮೀನುಗಾರಿಕೆ, ಜೇನುಕೃಷಿ, ಸೈಲೇಜ್ ತಯಾರಿಕ ಘಟಕ ಮತ್ತು ಎರೆಹುಳುಗೊಬ್ಬರ ಘಟಕಗಳನ್ನು ಇತರೆ ಯೋಜನೆಗಳೊಂದಿಗೆ ಒಗ್ಗೂಡಿಸುವುದು. **ಸದರಿ ಯೋಜನೆಯಡಿ ಪರಿಷ್ಕೃತ ಮಾರ್ಗಸೂಚಿಯನ್ವಯ ಪ್ರತಿ ಕೃಷಿ ಕುಟುಂಬಕ್ಕೆ ರೂ. 30,000/- ಆರ್ಥಿಕ ಸಹಾಯವನ್ನು ನೀಡಲಾಗುವುದು.**

3. **NABARD-RIDF –Tranche XXVII ರ Assisted Watershed Development Projects Tranche-27**

ಈ ಯೋಜನೆಯಡಿ ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಯೋಜನಾ ಪ್ರದೇಶದ 10 ಯೋಜನೆಗಳ ಮೇಲ್ ಸ್ತರಗಳಲ್ಲಿ ಬೋಲ್ಡರ್ ತಡೆ ಹಾಗೂ ರಬಲ್ ತಡೆಗಳನ್ನು ನಿರ್ಮಿಸಲಾಗುವುದು ಕೆಳ ಸ್ತರಗಳಲ್ಲಿ ವೈಜ್ಞಾನಿಕವಾಗಿ ಸೂಕ್ತವಾದ ಸಮುದಾಯ ಮತ್ತು ನಾಲಾ ಪ್ರದೇಶದ ಸ್ಥಳಗಳಲ್ಲಿ ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳಾದ ತಡೆ ಅಣೆ, ಕಿಂಡಿ ಅಣೆ, ನಾಲಾ ಬದು, ಗೋಕಟ್ಟೆ ಮತ್ತು ಇತ್ಯಾದಿ ಸ್ಥಳ ಸೂಕ್ತತೆಗೆ ಅನುಸಾರ ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ವಿನ್ಯಾಸಗಳನ್ನು ರಚಿಸಲಾಗುತ್ತದೆ. ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳ ಅಕ್ಕಪಕ್ಕದಲ್ಲಿರುವ ಎಲ್ಲಾ ರೈತರು ಯೋಜನೆಯ ಫಲಾನುಭವಿಗಳಾಗಿರುತ್ತಾರೆ.

4. **ವಿಶ್ವ ಬ್ಯಾಂಕ್ ನೆರವಿನ REWARD ಯೋಜನೆ:**

ರಾಜ್ಯದಲ್ಲಿ ಜಲಾನಯನ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಲು ಜಲಾನಯನ ಅಭಿವೃದ್ಧಿ ಇಲಾಖೆಯಿಂದ ವಿಶ್ವಬ್ಯಾಂಕ್ ನೆರವಿನೊಂದಿಗೆ REWARD ಯೋಜನೆಯನ್ನು 2022-23ನೇ ಸಾಲಿನಿಂದ ಜಾರಿಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ರಾಜ್ಯದ 25 ಜಿಲ್ಲೆಗಳ ಸುಮಾರು 25 ಲಕ್ಷ ಹೆ. ಮಳೆಯಾಶ್ರಿತ ಪ್ರದೇಶದಲ್ಲಿ ವೈಜ್ಞಾನಿಕ ವಿಧಾನದಲ್ಲಿ ವಿವಿಧ ತಾಂತ್ರಿಕ ಪಾಲುದಾರ ಸಂಸ್ಥೆಗಳ ಮೂಲಕ ಭೂ-ಸಂಪನ್ಮೂಲ ಸಮೀಕ್ಷೆ (Land Resource Inventory-LRI) ಮತ್ತು ಜಲವಿಜ್ಞಾನ ಅಧ್ಯಯನ (Hydrology) ಕೈಗೊಂಡು ಮಣ್ಣಿನ ಭೌತಿಕ ಹಾಗೂ ರಾಸಾಯನಿಕ ಗುಣಧರ್ಮಗಳ ದತ್ತಾಂಶ ಸಂಗ್ರಹಿಸಿ ಡಿಜಿಟಲ್ ಗ್ರಂಥಾಲಯ ಮತ್ತು ಭೂ-ಸಂಪನ್ಮೂಲ ಪೋರ್ಟಲ್‌ನಲ್ಲಿ ಅಳವಡಿಸಲಾಗುತ್ತದೆ.

ಯೋಜನಾ ಪ್ರದೇಶದ ಜಲಾನಯನಗಳಲ್ಲಿ ವೈಜ್ಞಾನಿಕವಾಗಿ ಸಂಗ್ರಹಿಸಿದ ಭೂ-ಸಂಪನ್ಮೂಲ ಮತ್ತು ಜಲ-ವಿಜ್ಞಾನ ಅಧ್ಯಯನದ ದತ್ತಾಂಶಗಳನ್ನು ಮತ್ತು ಶಿಫಾರಸ್ಸುಗಳನ್ನು ಆಧರಿಸಿ ಯೋಜನಾ ವ್ಯಾಪ್ತಿಯ ಅಂದಾಜು 1.00 ಲಕ್ಷ ಹೆ. ಜಲಾನಯನ ಪ್ರದೇಶದಲ್ಲಿ (20 ಉಪ-ಜಲಾನಯನಗಳು) ಜಲಾನಯನ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಯೋಜನಾ ವರದಿ ತಯಾರಿಸಿ ಸಂಪೂರ್ಣ ಜಲಾನಯನವನ್ನು ಉಪಚರಿಸಲಾಗುತ್ತದೆ. ಭೂರಹಿತರ ಜೀವನೋಪಾಯಕ್ಕಾಗಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ನೆರವು ನೀಡಲಾಗುತ್ತದೆ.

**5. ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (ಅಮೃತ ರೈತ ಉತ್ಪಾದಕ ಸಂಸ್ಥೆಗಳ ಸ್ಥಾಪನೆ ಮತ್ತು ಪ್ರೋತ್ಸಾಹ):**

ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಸ್ಥೆಯು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸಡಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದ್ದು, ರಾಜ್ಯ ಸರ್ಕಾರದಿಂದ ಅನುಧಾನ ನೀಡಲಾಗುತ್ತಿದೆ.

**FPO ಗಳಿಗೆ ಒದಗಿಸುವ ಸೌಲಭ್ಯ:**

ಅಮೃತ ರೈತ/ನೇಕಾರರ/ಮೀನುಗಾರರ ಉತ್ಪಾದಕರ ಸಂಸ್ಥೆಗಳ ಸ್ಥಾಪನೆ ಮತ್ತು ಪ್ರೋತ್ಸಾಹ ಯೋಜನೆಯಡಿ ಪ್ರತಿ ಉತ್ಪಾದಕರ ಸಂಸ್ಥೆಗೆ ಮೂರು ವರ್ಷಗಳ ಅವಧಿಗೆ ಗರಿಷ್ಠ ರೂ.30.00 ಲಕ್ಷಗಳ ವೆಚ್ಚ ಭರಿಸಲು ಅವಕಾಶವಿರುತ್ತದೆ. ಇದರಲ್ಲಿ ರೈತ ಉತ್ಪಾದಕರ ಸಂಸ್ಥೆಗಳ ನಿರ್ವಹಣೆಗಾಗಿ, FPO ಗಳ ಮೂಲಭೂತ ಸೌಕರ್ಯ ಕಲ್ಪಿಸಲು ಒಂದು ಬಾರಿ ಸುತ್ತು ನಿಧಿ ಹಾಗೂ ಸಂಪನ್ಮೂಲ ಸಂಸ್ಥೆಗಳ ಸೇವಾ ಶುಲ್ಕಗಳನ್ನು ಒಳಗೊಂಡಿರುತ್ತದೆ.

5. **ರೈತ ಉತ್ಪನ್ನಗಳಿಗೆ ಏಕೀಕೃತ ಬ್ರಾಂಡಿಂಗ್ ಯೋಜನೆ:**

- ಹಾಲಿ ಮತ್ತು ಮಾಜಿ ಕೃಷಿ/ತೋಟಗಾರಿಕೆ/ ಪಶು ಸಂಗೋಪನೆ ವಿಶ್ವವಿದ್ಯಾನಿಲಯಗಳ ವಿದ್ಯಾರ್ಥಿಗಳನ್ನು ಉದ್ದಿಮೆದಾರರಾಗಿ ಬೆಳೆಯಲು ಪ್ರೋತ್ಸಾಹಿಸುವುದು. ಉತ್ಪನ್ನಗಳ ಉತ್ಪಾದನೆ, ಸಂಸ್ಕರಣೆ ಮತ್ತು ಮಾರಾಟದಲ್ಲಿ ಹೊಸ ತಾಂತ್ರಿಕತೆ ಅಳವಡಿಸಿಕೊಳ್ಳಲು ಈ ವಿದ್ಯಾರ್ಥಿಗಳ ಸೇವೆಯನ್ನು ಬಳಸಿಕೊಂಡು ರೈತ ಉತ್ಪಾದಕರ ಸಂಸ್ಥೆಗಳ ಬಲವರ್ಧನೆಗೆ ಶ್ರಮಿಸುವುದು.
- ರೈತ ಉತ್ಪಾದಕರ ಸಂಸ್ಥೆಗಳಿಗೆ ಸಾಮರ್ಥ್ಯ ಬಲವರ್ಧನೆಯಲ್ಲಿ ಸಾಂಸ್ಥಿಕ ಬೆಂಬಲ ನೀಡುವುದು ಹಾಗೂ ಅವುಗಳಿಗೆ ಮುನ್ನಡೆಯಲು ಸಹಾಯ ಮಾಡುವುದು.
- ರೈತರು/ರೈತ ಉತ್ಪಾದಕರ ಸಂಸ್ಥೆಗಳಿಗೆ ಇತರ ಪಾಲುದಾರರೊಂದಿಗೆ ಮಾಹಿತಿ, ಉತ್ಪನ್ನಗಳು, ಸರಬರಾಜು ಮತ್ತು ಮಾರುಕಟ್ಟೆ ಸರಪಳಿ ಹಾಗೂ ಇತರೆ ಸೇವೆಗಳನ್ನು ಒದಗಿಸುವ ವೇದಿಕೆ ಕಲ್ಪಿಸುವುದು.
- ರೈತರ ಉತ್ಪನ್ನಗಳನ್ನು ರೈತ ಉತ್ಪಾದಕರ ಸಂಸ್ಥೆಗಳ ಮೂಲಕ ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ 'ನಂದಿನಿ' ಮಾದರಿಯಲ್ಲಿ ಏಕೀಕೃತ ಬ್ರ್ಯಾಂಡಿಂಗ್ ರೂಪಿಸುವುದು.

7. **ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲ್ಲೂಕುಗಳ 100 ರೈತ ಉತ್ಪಾದಕರ ಸಂಸ್ಥೆಗಳಿಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳು ನೀಡುವ ತಲಾ ರೂ. 20.00 ಲಕ್ಷ ಗಳವರೆಗಿನ ಸಾಲಕ್ಕೆ ಶೇ.4ರ ಬಡ್ಡಿ ಸಹಾಯಧನ ನೀಡುವ ಯೋಜನೆ.**

ರೈತ ಉತ್ಪಾದಕರ ಸಂಸ್ಥೆಗಳು ಗ್ರಾಹಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ರೈತರ ಉತ್ಪನ್ನಗಳನ್ನು ಕ್ರೋಢೀಕರಿಸಿ, ಮೌಲ್ಯವರ್ಧಿಸಿ, ಗ್ರಾಹಕರಿಗೆ ಉತ್ತಮ ಗುಣಮಟ್ಟದ ಸಂಸ್ಕರಿಸಿದ ಉತ್ಪನ್ನಗಳನ್ನು ರೈತ ಉತ್ಪಾದಕರ ಸಂಸ್ಥೆಗಳ ಮೂಲಕ ಮಾರುಕಟ್ಟೆ ದರಕ್ಕಿಂತ ಕಡಿಮೆ ದರದಲ್ಲಿ ಒದಗಿಸುವ ಮೂಲಕ ಹಿಂದುಳಿದ ತಾಲ್ಲೂಕುಗಳ ರೈತ ಉತ್ಪಾದಕರ ಸಂಸ್ಥೆಗಳ ಆದಾಯ ವೃದ್ಧಿಸಲು ಸಹಕಾರಿಯಾಗಲು ಸದರಿ ಯೋಜನೆಯನ್ನು ರೂಪಿಸಲಾಗಿರುತ್ತದೆ.

8. **ಕೇಂದ್ರ ವಲಯ ಯೋಜನೆ - 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ:**

ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಸ್ಥೆಯು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು

ಸಡಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದ್ದು, ಕೇಂದ್ರ ಸರ್ಕಾರದಿಂದ ಅನುಧಾನ ನೀಡಲಾಗುತ್ತಿದೆ. ಈ ಯೋಜನೆಯಡಿ ಪ್ರತಿ ಉತ್ಪಾದಕರ ಸಂಸ್ಥೆಗೆ 05 ವರ್ಷಗಳ ಅವಧಿಗೆ ಗರಿಷ್ಠ ರೂ.58.00 ಲಕ್ಷಗಳ ವೆಚ್ಚ ಭರಿಸಲು ಅವಕಾಶವಿರುತ್ತದೆ.

**ಇತರೆ ಇಲಾಖೆಯ ಅನುದಾನದಿಂದ ಅನುಷ್ಠಾನ ಮಾಡಲಾಗುತ್ತಿರುವ ಯೋಜನೆಗಳು:**

1. **ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ -ಇತರೆ ಉಪಚಾರಗಳು (PMKSY -OI):**

   ಇದು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಯೋಜನೆಯನ್ನು ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆಯ- ಪ್ರತಿ ಹನಿಗೆ ಹೆಚ್ಚು ಬೆಳೆ (PMKSY-PDMC) ಕಾರ್ಯಕ್ರಮದಡಿ ಗರಿಷ್ಠ ಶೇ.20ರಷ್ಟು ಅನುದಾನವನ್ನು ಬಳಸಿಕೊಂಡು ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ- ಇತರೆ ಉಪಚಾರಗಳು (PMKSY-OI) ಯೋಜನೆಯಡಿ ರೈತರಿಗೆ ವೈಯಕ್ತಿಕ ನೀರು ಸಂಗ್ರಹಣಾ ವಿನ್ಯಾಸಗಳ ರಚನೆ, ಕೊಳವೆ ಬಾವಿಗಳ ರಚನೆ, ವೈಯಕ್ತಿಕ ಸಣ್ಣ ಕೆರೆಗಳ ಪುನರುಜ್ಜೀವನ, ನಿಷ್ಕ್ರಿಯ ಕೊಳವೆ ಬಾವಿಗಳ ಪುನರುಜ್ಜೀವನ, ಪೈಪುಗಳ ವಿತರಣೆ ಮತ್ತು ವಿದ್ಯುತ್ ಚಾಲಿತ/ಪವನ ಚಾಲಿತ/ಸೋಲಾರ್ ನೀರೆತ್ತುವ ಸಾಧನಗಳನ್ನು ಅಳವಡಿಸಿಕೊಳ್ಳಲು ಶೇ. 50 ರಷ್ಟು ಸಹಾಯಧನ ಅಥವಾ ಆಯಾ ಘಟಕಗಳಿಗೆ ನಿಗಧಿಪಡಿಸಿದ ಗರಿಷ್ಠ ಮೊತ್ತ ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಮೊತ್ತವನ್ನು ಒದಗಿಸಲು ಅವಕಾಶವಿರುತ್ತದೆ. **ಒಬ್ಬ ವೈಯಕ್ತಿಕ ಫಲಾನುಭವಿಗಳಿಗೆ ಗರಿಷ್ಠ ರೂ.75,000 ದ ವರೆಗೆ ಸಹಾಯಧನದ ಅನುದಾನದ ಲಭ್ಯತೆ ಇರುತ್ತದೆ.**

2. **ಅಟಲ್ ಭೂಜಲ್ ಯೋಜನೆ**

   ಅಟಲ್ ಭೂಜಲ್ ಯೋಜನೆಯು ಜಲ್ ಶಕ್ತಿ ಮಂತ್ರಾಲಯ, ಭಾರತ ಸರ್ಕಾರದ ಕೇಂದ್ರ ವಲಯ ಯೋಜನೆಯಾಗಿದ್ದು, ಗುರುತಿಸಲಾದ ನೀರಿನ ಶೋಷಿತ ಪ್ರದೇಶಗಳಲ್ಲಿ ಅಂತರ್ಜಲ ನೀರಿನ ಬೇಡಿಕೆ ಮತ್ತು ಸರಬರಾಜು ನಿರ್ವಹಣೆಗೆ ಸಮುದಾಯ ಸಹಭಾಗಿತ್ವದಲ್ಲಿ ಒತ್ತು ನೀಡಲು ರೂಪಿಸಿರುವ ಕಾರ್ಯಕ್ರಮವಾಗಿದೆ. ರಾಜ್ಯದಲ್ಲಿ ಆಯ್ದ 14 ಜಿಲ್ಲೆಗಳ 41 ತಾಲ್ಲೂಕುಗಳಲ್ಲಿ 1199 ಅಂತರ್‌ಜಲ ಶೋಷಿತ ಗ್ರಾಮ ಪಂಚಾಯತಿಗಳಲ್ಲಿ ಕೇಂದ್ರ ಮತ್ತು ರಾಜ್ಯ ಯೋಜನೆಗಳ ಒಗ್ಗೂಡಿಸುವಿಕೆಯ ಮೂಲಕ ಅಂತರ್ಜಲ ನಿರ್ವಹಣೆಯನ್ನು ಉತ್ತೇಜಿಸುವುದು ಯೋಜನೆಯ ಒಂದು ಪ್ರಮುಖ ಉದ್ದೇಶವಾಗಿರುತ್ತದೆ.

3. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ತಡೆಅಣೆ /ಕಿಂಡಿಆಣೆ ನಿರ್ಮಾಣ (RKVY-CD)**

   ಇದು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಈ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕ್ರಮವಾಗಿ ಶೇಕಡ 60:40 ಅನುಪಾತದಲ್ಲಿ ಅನುದಾನವನ್ನು ಭರಿಸುತ್ತವೆ. ರಾಜ್ಯದ 08 ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುವುದು. ತಡೆಅಣೆ/ಕಿಂಡಿ ಆಣೆಯು ಮಳೆ ನೀರು ಕೊಚ್ಚಣೆಯಿಂದ ಹಳ್ಳಗಳಲ್ಲಿ ಹರಿದು ಹೋಗುವ ನೀರನ್ನು ತಡೆಗಟ್ಟಲು ರಚಿಸಲಾಗುವ ಮಳೆ ನೀರು ಕೊಯ್ಲು ರಚನೆಯಾಗಿರುತ್ತದೆ. ಹರಿದು ಹೋಗುವ ಮಳೆ ನೀರನ್ನು ತಡೆಗಟ್ಟುವುದರಿಂದ ಭೂಮಿಯಲ್ಲಿ ನೀರನ್ನು ಇಂಗಿಸಲು ಹೆಚ್ಚು ಸಮಯಾವಕಾಶ ನೀಡುವ ಮೂಲಕ ಅಂತರ್ಜಲ ವೃದ್ಧಿಗೆ ಅನುಕೂಲವಾಗುವುದು.

4. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ನೀರು ಕೊಯಿಲು ರಚನೆ ಕಾರ್ಯಕ್ರಮ (RKVY-WHS):**

   2024-25ನೇ ಸಾಲಿನಲ್ಲಿ ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುವುದು. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ನೀರು ಕೊಯ್ಲು ರಚನೆಯನ್ನು ಪ್ರಮುಖವಾಗಿ ಸಮುದಾಯ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು, ನಾಲೆಯ ಎರಡೂ ಬದಿಗಳಲ್ಲಿ ಜಮೀನು ಹೊಂದಿರುವ ರೈತರು ಮುಖ್ಯ ಫಲಾನುಭವಿಗಳಾಗುತ್ತಾರೆ.

5. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ (RKVY-RPS)**

   ಸಮಸ್ಯಾತ್ಮಕ ಮಣ್ಣಿನ ಪ್ರದೇಶಗಳಲ್ಲಿ ಅಂತರ ಬಸಿ ಕಾಲುವೆ ನಿರ್ಮಾಣ ಮೂಲಕ ಸವಳು ಜವಳು ಮಣ್ಣಿನ ಸುಧಾರಣೆ ಕ್ರಮಗಳನ್ನು ಕೈಗೊಂಡು, ರೈತರಲ್ಲಿ ಮಣ್ಣಿನ ಸಮಸ್ಯೆ ಕುರಿತು ಅರಿವು ಮೂಡಿಸಿ, ಸುಧಾರಿತ ಬೇಸಾಯ ಕ್ರಮಗಳನ್ನು ಅಳವಡಿಸಲು ಉತ್ತೇಜಿಸುವುದು. ಹೊರಹಾಕಿ ಮಣ್ಣಿನ ಗುಣಧರ್ಮವನ್ನು ಕಾಪಾಡುವ ಉಪಚಾರವನ್ನು (ಕಪ್ಪು ಮಣ್ಣಿನಲ್ಲಿ ಅಂದಾಜು ರೂ.1.25 ಲಕ್ಷ ಮತ್ತು ಕೆಂಪು ಮಣ್ಣಿನಲ್ಲಿ ರೂ.0.65 ಲಕ್ಷ ಪ್ರತಿ ಹೆಕ್ಟೇರಿಗೆ) ಕೈಗೊಳ್ಳಲಾಗುವುದು.

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ ಕಾರ್ಯಕ್ರಮದಡಿ ಸವಳು ಜವಳು ಬಾಧಿತ ಪ್ರದೇಶದಲ್ಲಿ ಒಟ್ಟಾರೆ ಪ್ರದೇಶವನ್ನು ಗುಚ್ಛ ಮಾದರಿಯಲ್ಲಿ (contiguous area) ಉಪಚರಿಸಲು ಅನುಕೂಲವಾಗುವಂತೆ ಆ ವಿಸ್ತಾರ ಪ್ರದೇಶದ ರೈತರುಗಳನ್ನು ಫಲಾನುಭವಿಗಳನ್ನಾಗಿ ಆಯ್ಕೆ ಮಾಡಲಾಗುತ್ತದೆ. ಫಲಾನುಭವಿ ರೈತರು ಮಣ್ಣಿನ ಉಪಚಾರ ಮತ್ತು ಬೆಳೆ ಶಿಫಾರಸ್ಸಿನ ಅನ್ವಯ ಬೇಸಾಯ ಕ್ರಮಗಳನ್ನು ಪಾಲಿಸುವ ಮನೋಭಾವ ಉಳ್ಳವರಾಗಿರಬೇಕು.